**ದಿನಾಂಕಃ 05.09.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ.ಜೆ ಪಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ತಿಳಿದು ಸಹಿ ಮಾಡಿರುತ್ತೇನೆ.

ಜಂಜರ್ ನಂಬರ್ 352 ರ ಇ-ಸ್ವತ್ತಿನ ಗಣಕೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-1 ಎಂದು, ಇಂಡೆಕ್ಷ ಆಫ್ ಲ್ಯಾಂಡ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-2 ಎಂದು, ಇಂಡೆಕ್ಷ ಆಫ್ ಲ್ಯಾಂಡ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-3 ಎಂದು, ರೆಕಾರ್ಡ್ ಆಫ್ ರೈಟ್ಸ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-4 ಎಂದು, ಟಿ ಬೆಟ್ಟಹಳ್ಳಿ ಗ್ರಾಮದ ಸರ್ವೆ ನಂಬರ್ 40/2 ರ ಪಹಣಿ ಪತ್ರಿಕೆಯ ಗಣಕೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-5 ಎಂದು, ಟಿ ಬೆಟ್ಟಹಳ್ಳಿ ಗ್ರಾಮದ ಸರ್ವೆ ನಂಬರ್ 41/2 ರ ಪಹಣಿ ಪತ್ರಿಕೆಯ ಗಣಕೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ